# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 2005 (2369) |
| ಸದಸ್ಯರ ಹೆಸರು | | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾಗಿದ್ದ ದಿನಾಂಕ | | 29.03.2021 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| (ಅ) | ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೊಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ: 440 |
| (ಆ) | ಸದರಿ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು? | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಒಟ್ಟು 412 ಕಾಲೇಜುಗಳಿಗೆ ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿರುತ್ತದೆ. ಪ್ರಸ್ತುತ ಖಾಲಿ ಇರುವ ಪ್ರಾಂಶುಪಾಲರ 410 ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುತ್ತದೆ. |
| (ಇ) | ದೀರ್ಘಕಾಲದಿಂದ ಖಾಯಂ ಪ್ರಾಂಶುಪಾಲರನ್ನು ನೇಮಕ ಮಾಡಿಕೊಳ್ಳದಿರಲು ಕಾರಣಗಳೇನು? ಇದರಿಂದ ಕಾಲೇಜಿನ ಆಡಳಿತ ನಿರ್ವಹಣೆಗೆ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ: 25.09.2009ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೊಳಿಸಿದ್ದು, ಸದರಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2006ರ ಯು.ಜಿ.ಸಿ. ಪರಿಷ್ಕೃತ ವೇತನ ಶ್ರೇಣಿಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ಹೊರಡಿಸಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 37 ಯುಎನ್‌ಇ 2009, ದಿನಾಂಕ: 24.12.2009 ರಲ್ಲಿಯೂ ಸಹ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ.<br><br>ಅದರಂತೆ, ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ಪ್ರಾಂಶುಪಾಲರು(ಯು.ಜಿ.) ಹುದ್ದೆಗಳ ನೇಮಕಾತಿ) (ವಿಶೇಷ) ನಿಯಮಗಳು, 2020ನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 121 ಡಿಸಿಇ 2018, ದಿನಾಂಕ:09.09.2020 ರಲ್ಲಿ 310 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಲಾಗಿರುತ್ತದೆ ಹಾಗೂ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸರ್ಕಾರದ ಪತ್ರ ಸಂಖ್ಯೆ: ಇಡಿ 257 ಡಿಸಿಇ 2019, ದಿನಾಂಕ: 29.06.2021ರಲ್ಲಿ ಅನುಮತಿಯನ್ನು ನೀಡಲಾಗಿರುತ್ತದೆ. |
| ಈ | ಹಾಗಾದಲ್ಲಿ, ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಯಾವ ನಿಯಮಗಳನ್ನು ಅನುಸರಿಸಲಾಗುತ್ತದೆ; | |
| ಉ) | ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು? (ವಿವರಗಳನ್ನು ನೀಡುವುದು) | |

| | | |
|---|---|---|
| | | ಮುಂದುವರೆದು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗೆ ಸೇವಾ ಜೇಷ್ಠತೆಯಲ್ಲಿ ಹಿರಿಯರು ಹಾಗೂ ಅನುಭವಿ ಬೋಧಕರಿಗೆ ಪ್ರಾಂಶುಪಾಲರ ಹುದ್ದೆಯಲ್ಲಿ ಪ್ರಭಾರವನ್ನು ವಹಿಸುವುದರ ಮೂಲಕ ಕಾಲೇಜಿನ ಆಡಳಿತ ನಿರ್ವಹಣೆಗೆ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗದಂತೆ ಕ್ರಮವಹಿಸಲಾಗಿರುತ್ತದೆ. |

ಇಡಿ 88 ಡಿಸಿಇ 2021

(ಡಾ.ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು
ತಂತ್ರಜ್ಞಾನ ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು